# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)
## ವಾರ್ಡ್ ಸಮಿತಿ ಸಭೆ, ದಿನಾಂಕ:03-04-2021 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/14/21-22

ದಿನಾಂಕ: 03-04-2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Rahul | JE BWSSB |
| 3. | Smt. Suguna | Revenue Department |
| 4. | Sri. Madhu | Junior Health Inspector |
| 5. | Sri Mallesh | BESCOM |
| 6. | Sri Inayath | Street Light I/c |
| 7. | Sri. Purushotham | Ward Committee Member |
| 8. | Sri. Syed Ansar Pasha | Ward Committee Member |
| 9. | Sri. Ahmed Husain | Ward Committee Member |
| 10. | Sri Chand pasha | Ward Committee Member |
| 11. | Sri Hidayath | Ward Committee Member |
| 12. | Sri Zameer | Ward Committee Member |
| 13. | Sri Aravind | Ward Committee Member |
| 14. | Sri Suresh | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

- ದಿನಾಂಕ : 20-03-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ಮೋದಿ ಗಾರ್ಡನ್, 6ನೇ ಅಡ್ಡರಸ್ತೆ, ಬಂಗಾರಗಿರಿ ನಗರ ಹಾಗೂ ಮೋದಿ ಗಾರ್ಡನ್ ಸ್ಲಮ್ ಬಳಿ ಕೆಲವು ಸಾರ್ವಜನಿಕರು ತಮ್ಮ ಶೌಚಾಲಯಗಳಿಂದ ಪೈಪ್‌ಲೈನ್ ಸಂಪರ್ಕವನ್ನು ಯುಜಿಡಿ ಗೆ ನೀಡದೇ ನೇರವಾಗಿ ಮಳೆನೀರು ಕಾಲುವೆಗೆ ಸಂಪರ್ಕ ಕಲ್ಪಿಸಿರುವುದಾಗಿ ಸಾರ್ವಜನಿಕರು ತಿಳಿಸಿದ್ದು, ಇದರಿಂದ ಮಳೆನೀರು ಕಾಲುವೆಯಲ್ಲಿ ಹೆಚ್ಚಿನ ಪ್ರಮಾಣದ ಹೂಳು ತುಂಬಿ ಮಳೆಗಾಲದಲ್ಲಿ ನೀರು ಕಾಲುವೆಯಿಂದ ಹೊರಬಂದು ರಸ್ತೆಯ ಮೇಲೆ ಹರಿಯುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ತಿಳಿಸಿರುತ್ತಾರೆ. ಆದ್ದರಿಂದ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸ್ಥಳ ಪರಿಶೀಲಿಸಿ ಸಂಬಂಧಪಟ್ಟ ಸಾರ್ವಜನಿಕರಿಗೆ ಸೂಚನೆ ನೀಡುವಂತೆ ಸೂಚಿಸಲಾಗಿ ಸದರಿ ಸ್ಥಳವು ಶ್ರೀ ದಸ್ತಗೀರ್ ಬಾಷಾ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರ ವ್ಯಾಪ್ತಿಗೆ ಬರುತ್ತಿದ್ದು, ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
2. ವಾರ್ಡ್ ನಂ.47 ರ ವ್ಯಾಪ್ತಿಯಲ್ಲಿ ಹೆಚ್ಚುವರಿ ಮಾರ್ಷಲ್‌ಗಳನ್ನು ನಿಯೋಜಿಸಲು ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ವಿಲೇವಾರಿ ವಿಭಾಗ) ರವರಿಗೆ ಈ ಹಿಂದಿನ ಸಭೆಗಳಲ್ಲಿ ಸೂಚಿಲಾಗಿತ್ತು. ಆದರೆ ಈವರೆವಿಗೆ ಹೆಚ್ಚುವರಿ

ಮಾರ್ಷಲ್‌ಗಳನ್ನು ನಿಯೋಜಿಸಲಾಗಿಲ್ಲ ಎಂದು ತಿಳಿದು ಬಂದಿದ್ದು. ಹೆಚ್ಚುವರಿ ಮಾರ್ಷಲ್‌ಗಳ ನಿಯೋಜನೆ ಕುರಿತಂತೆ ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವಂತೆ ಈ ಹಿಂದಿನ ಸಭೆಗಳಲ್ಲಿ ಸೂಚಿಸಲಾಗಿದ್ದರೂ. ಈವರೆವಿಗೆ ಹೆಚ್ಚುವರಿ ಮಾರ್ಷಲ್ ಗಳ ನಿಯೋಜನೆ ಆಗಿಲ್ಲದಿರುವುದನ್ನು ಗಮನಿಸಿ ಸ.ಕಾ.ಅ (ಘನತ್ಯಾಜ್ಯ ವಿಲೇವಾರಿ ಘಟಕ) ರವರಿಗೆ ಕೂಡಲೇ ಪ್ರಸ್ಥಾವನೆ ಸಲ್ಲಿಸಿ ಆದ್ಯತೆಯ ಮೇರೆಗೆ ಅನುಮೋದನೆ ಪಡೆದುಕೊಳ್ಳಲು ಅಗತ್ಯ ಕ್ರಮಕ್ಕಾಗಿ ಸೂಚಿಸಲಾಯಿತು.

3. ಕೋವಿಡ್‌-19 ಸಾಂಕ್ರಮಿಕ ರೋಗವನ್ನು ತಡೆಗಟ್ಟಲು ಲಸಿಕೆಯನ್ನು 45 ವರ್ಷಗಳ ಮೇಲ್ಪಟ್ಟ ಪ್ರತಿಯೊಬ್ಬ ಸಾರ್ವಜನಿಕರು ತಪ್ಪದೇ ಪಡೆದುಕೊಳ್ಳುವಂತೆ ಜಾಗೃತಿ ಮೂಡಿಸಲು ಬೆಳಗಿನ ಸಂದರ್ಭದಲ್ಲಿ ಕಸ ವಿಲೇವಾರಿ ಆಟೋಗಳ ಮುಖಾಂತರ ಪ್ರಚಾರ ಪಡಿಸಲು ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
4. ದೇವೆಗೌಡ ರಸ್ತೆಯಲ್ಲಿ ಮಿಲಿಟರಿ ಕಾಂಪೌಂಡ್ ಗೆ ಹೊಂದಿಕೊಂಡಂತೆ ಹಾಗೂ ರಸ್ತೆಯ ಉದ್ದಕ್ಕೂ ಅಗಾದ ಪ್ರಮಾಣದ ಕಸ ಹಾಗೂ ಕಟ್ಟಡ ನಿರ್ಮಾಣ ತ್ಯಾಜ್ಯ ಸುರಿದಿದ್ದು. ಇವುಗಳನ್ನು ತೆರವುಗೊಳಿಸುವಂತೆ ಶ್ರೀಮತಿ.ಪ್ರೀತಿ ರವರು ಮೇಲಾಧಿಕಾರಿಗಳ ಗಮನಕ್ಕೆ ತಂದಿದ್ದು. ಅದರಂತೆ ದೇವೆಗೌಡ ರಸ್ತೆಯಲ್ಲಿ ಸುರಿದರಿರುವ ತ್ಯಾಜ್ಯ ಹಾಗೂ ಕಟ್ಟಡ ನಿರ್ಮಾಣ ತ್ಯಾಜ್ಯವನ್ನು ತೆರವುಗೊಳಿಸಲು ಸಂಬಂಧಪಟ್ಟ ಘನತ್ಯಾಜ್ಯ ವಿಲೇವಾರಿ ಘಟಕ ಹಾಗೂ ಕಾಮಗಾರಿ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ ಸೂಚಿಸಲಾಯಿತು ಹಾಗೂ ಸದರಿ ದೇವೆಗೌಡ ರಸ್ತೆಯು ಬೃಹತ್ ರಸ್ತೆಗಳ ವಿಭಾಗ ವ್ಯಾಪ್ತಿಗೆ ಒಳಪಟ್ಟಿರುವುದರಿಂದ ಈ ರಸ್ತೆಯಲ್ಲಿ ಸುರಿಯಲಾಗಿರುವ ಕಟ್ಟಡ ನಿರ್ಮಾಣ ತ್ಯಾಜ್ಯಗಳನ್ನು ತೆರವುಗೊಳಿಸಲು ಸೂಚಿಸಲಾಗಿರುತ್ತದೆ.
5. ಮೋದಿ ರಸ್ತೆಯಲ್ಲಿ ರಸ್ತೆ ಬದಿಯ ಚರಂಡಿಗಳಲ್ಲಿ ಹೂಳು ತುಂಬಿದ್ದು. ಸದರಿ ಹೂಳನ್ನು ತ್ವರಿತ ಗತಿಯಲ್ಲಿ ಹೂಳು ತೆಗೆದು ಕಾಲುವೆಯಲ್ಲಿ ನೀರು ಸರಾಗವಾಗಿ ಹರಿಯಲು ಅನುವು ಮಾಡುವಂತೆ ಕಾಮಗಾರಿ ಇಲಾಖೆಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.
6. ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಕೊರೆಯಲಾಗಿರುವ ಕೊಳವೆ ಬಾವಿಗಳಲ್ಲಿ ಮೋಟಾರ್‌ಗಳನ್ನು ಅಳವಡಿಸದೇ ಇರುವುದರಿಂದ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು. ಅಗತ್ಯವಿರುವ ಕಡೆ ಆದ್ಯತೆಯ ಮೇರೆ ಪಂಪು ಮೋಟಾರ್ ಅಳವಡಿಸಲು ಕ್ರಮ ಕೈಗೊಳ್ಳುವಂತೆ ಕಾಮಗಾರಿ ಇಲಾಖೆ ರವರಿಗೆ ಸೂಚಿಸಲಾಯಿತು.
7. ವಾರ್ಡ್ ವ್ಯಾಪ್ತಿಯಲ್ಲಿ ಹಲವಾರು ಕಡೆ ಕಸವಿಲೇವಾರಿ ಆದರೂ ಬ್ಲೀಚಿಂಗ್ ಪೌಡರ್ ಸಿಂಪಡಿಸುತ್ತಿಲ್ಲ ಎಂದು ಸಾರ್ವಜನಿಕರು ತಿಳಿಸಿದ್ದು. ಅದರಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸಂಬಂಧಪಟ್ಟವರನ್ನು ಸಂಪರ್ಕಿಸಿ ಬ್ಲೀಚಿಂಗ್ ಪೌಡರನ್ನು ಪಡೆದು ಅಗತ್ಯವಿರುವ ಕಡೆಗಳಲ್ಲಿ ಸಿಂಪಡಿಸಲು ಸೂಚಿಸಲಾಯಿತು.

ಸಹಿ
(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ). ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ). ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ. ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
07 ಸಹಾಯಕ ಕಾರ್ಯಪಾಲಕ ಅಭಿಯಂತರರು. ಬಿಡಬ್ಲ್ಯೂಎಸ್‌ಎಸ್‌ಬಿ. ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

ಸಹಿ
(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47